



ಅರುಣ ಪಿ. ಭಟ್ಟ

# ವಾರಭವಿಷ್ಯ 18.2.2021ರಿಂದ 24.2.2021ರವರೆಗೆ




ಮಕ್ಕಳ ಬಗ್ಗೆ ನಿಮ್ಮ ಗಮನ ಹಾಗೂ ಅವರ ಪರಿಸರವನ್ನು ನೀವು ಉತ್ತಮವಾಗಿಟ್ಟುಕೊಳ್ಳುವ ಮನಸ್ಥಿತಿಯನ್ನು ರೂಪಿಸುವುದು ಒಳ್ಳೆಯದು. ಶ್ರಮದ ಕೆಲಸಗಳಿಂದ ಸಾರ್ಥಕತೆಯ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುತ್ತದೆ. ಕೌಟುಂಬಿಕವಾಗಿ ಬಹಳ ನೆಮ್ಮದಿಯಾಗಿ ಇರುತ್ತೀರಿ. ಶುಭದಿನ **20.** ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಆದಾಯ ವೃದ್ಧಿಯಾಗಲಿದೆ. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ವಾರವಿಡಿ ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಶುಭದಿನ **22.** ಆದಿತ್ಯ ಹೃದಯ ಪಠಿಸಿರಿ.




ನಿಮ್ಮ ಜಡತ್ವ ಕರಗಿ ಹೋಗಲಿದೆ. ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ. ಯೋಜನೆ ರೂಪಿಸಬೇಕಾದ ಅನಿವಾರ್ಯತೆ ಕಂಡುಬರುತ್ತದೆ. ಶುಭದಿನ **24.** ಸೌಂದರ್ಯ ಲಹರಿ ಪಠಿಸಿರಿ.




ಕೆಲಸದಲ್ಲಿ ಅನಗತ್ಯವಾಗಿ ತೊಂದರೆ ಬರಬಹುದು. ಸಮಸ್ಯೆಗಳಿಗೆ ಪರಿಹಾರ ಹುಡುಕಿ, ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಚಿಂತನೆ ನಡೆಸುವಿರಿ. ಶುಭದಿನ **21.** ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ಧನ ನಷ್ಟ ಸಂಭವ ಆಗಬಹುದು. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದ ಅತಿಶಯೋಕ್ತಿಯಾಗಿ ಕಾಣಬಹುದು. ಎಲ್ಲರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿದೆ. ಶುಭದಿನ **22.** ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ಹಿರಿಯರ ಬಗ್ಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಆರ್ಥಿಕ ಗಳಿಕೆ ಇದ್ದರೂ ಕೆಲ ವಿಷಯಗಳಲ್ಲಿ ನಿಮ್ಮ ದುಡುಕುತನ ದೊಡ್ಡಪೆಟ್ಟನ್ನು ನೀಡಬಹುದು. ಮನಸ್ಸು ಮರ್ಕಟವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆಗಳು ಕಂಡುಬರುತ್ತದೆ. ಶುಭದಿನ **23.** ಹನುಮಾನ್ ಚಾಲಿಸ್ ಪಠಿಸಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬದಿಂದ ನಿಮ್ಮ ಬಗ್ಗೆ ಹಲವರು ಹಲವಾರು ಮಾತುಗಳನ್ನಾಡುವರು. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಕಂಡುಬರುತ್ತದೆ. ಟೀಕಿಸುವ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲ ಜನರೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುತ್ತಿರುವರು. ಶುಭದಿನ **20.** ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನಗಳು ಕಂಡುಬರುತ್ತಾರೆ. ಸಂಗಾತಿಯ ಜೊತೆಗೆ ಖರೀದಿ ಪ್ರಕ್ರಿಯೆಗಳನ್ನು ಮಾಡಲು ಇಚ್ಛಿಸುತ್ತೀರಿ. ಮುಷ್ಟಿ ಕಾಳು ಚೆಲ್ಲಿ ಮೂಟೆ ಕಾಳನ್ನು ಪಡೆಯುವಂತೆ ನಿಮ್ಮ ಹಣ ಖರ್ಚಾಗುವುದು.ಅತಿಯಾದ ಮಾನಸಿಕ ಸಮಸ್ಯೆಯನ್ನು ದೂರವಿಡಿ. ಶುಭದಿನ **19.** ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜತೆ ಅನಗತ್ಯವಾದ ವಾದ–ವಿವಾದಗಳು ಆಗಿ, ಒತ್ತಡ ಏರ್ಪಡುತ್ತದೆ. ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಶುಭದಿನ **22.** ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಕೃಷಿ ಚಟುವಟಿಕೆಗಳಲ್ಲಿ ಉತ್ತಮವಾದ ಬೆಳವಣಿಗೆ ಕಂಡುಬರುತ್ತದೆ. ಅತ್ಯಂತ ಚುರುಕುತನದಿಂದ ಇದ್ದ ನೀವು ಆಲಸ್ಯತನ ತೋರುವುದರಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಸಂಬಂಧಗಳಲ್ಲಿ ಸಂತಸ ಇರುತ್ತದೆ. ನಿಮ್ಮ ಮಕ್ಕಳ ಪಠ್ಯೇತರ ಆಸಕ್ತಿಯನ್ನು ಗುರುತಿಸಿ. ಶುಭದಿನ **23.** ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿವಿನಿಂದ ಹೊರಬರಲು ಪ್ರಯತ್ನ ಮೆಚ್ಚುವಂತದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ **24.** ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿದೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತದೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ. ಯಶಸ್ವಿ ದಾಯಕ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ಹಣಕಾಸಿನ ವ್ಯವಹಾರ ನಿಮಗೆ ಹೆಚ್ಚಿನ ಪ್ರಶಂಸೆಯನ್ನು ತಂದುಕೊಡುವುದು. ಶುಭದಿನ 21. ವಿಷ್ಣು ಸಹಸ್ರನಾಮ ಮಾಡಿರಿ.